## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1464
ಸದಸ್ಯರ ಹೆಸರು : ಶ್ರೀ ಎಂ.ಎ.ಗೋಪಾಲಸ್ವಾಮಿ
ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು
ಉತ್ತರಿಸುವ ದಿನಾಂಕ : 24.09.2021.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ನೌಕರರಿಗೆ ವೇತನ ಮತ್ತು ಭತ್ಯೆಗಳನ್ನು ಹೆಚ್ಚಳ ಮಾಡುವಂತೆ ಕೆಲವು ತಿಂಗಳುಗಳ ಹಿಂದೆ ನಡೆದ ಪ್ರತಿಭಟನೆಗಳ ಹಿನ್ನೆಲೆಯಲ್ಲಿ ಈ ನೌಕರರಿಗೆ ಸರ್ಕಾರವು ನೀಡಿದ್ದ ಭರವಸೆಗಳೇನು; ಈ ಭರವಸೆಗಳನ್ನು ಈಡೇರಿಸಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು) | ನಾಲ್ಕೂ ಸಾರಿಗೆ ಸಂಸ್ಥೆಗಳ ನೌಕರರ ಪ್ರತಿಭಟನೆಗಳ ಹಿನ್ನೆಲೆಯಲ್ಲಿ ಸರ್ಕಾರವು ನೀಡಿದ್ದ ಭರವಸೆಗಳು ಮತ್ತು ಈ ಭರವಸೆಗಳ ಬಗ್ಗೆ ಸರ್ಕಾರವು ತೆಗೆದುಕೊಂಡಿರುವ ಕ್ರಮದ ವಿವರವನ್ನು **ಅನುಬಂಧ** ದಲ್ಲಿ ನೀಡಲಾಗಿದೆ. |
| ಆ. | ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ನೌಕರರಿಗೆ ವಿಳಂಬವಾಗಿ ವೇತನ ಪಾವತಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಕೋವಿಡ್-19 ಸಾಂಕ್ರಾಮಿಕದಿಂದ ಕೆ.ಎಸ್.ಆರ್.ಟಿ.ಸಿಯು ಎದುರಿಸುತ್ತಿರುವ ಆರ್ಥಿಕ ಸಂಕಷ್ಟ ಪರಿಸ್ಥಿತಿಯನ್ನು ಗಮನಿಸಿ, 2020-21ನೇ ಸಾಲಿನಲ್ಲಿ ನಿಗಮದ ಸಿಬ್ಬಂದಿಗಳ ವೇತನ ಪಾವತಿಗಾಗಿ ವಿಶೇಷ ಸಹಾಯಧನ ರೂ.563.55 ಕೋಟಿಗಳನ್ನು ಮತ್ತು ಬೆಂ.ಮ.ಸಾ.ಸಂಸ್ಥೆಗೆ ರೂ.690.55 ಕೋಟಿಗಳನ್ನು ಬಿಡುಗಡೆಗೊಳಿಸಿದೆ.<br><br>2021-22ನೇ ಸಾಲಿನಲ್ಲಿ ಜುಲೈ-2021ರ ಮಾಹೆಯವರೆಗಿನ ವೇತನ ಪಾವತಿಗಾಗಿ ಕ.ರಾ.ರ.ಸಾ.ನಿಗಮಕ್ಕೆ ವಿಶೇಷ ಸಹಾಯಧನ ರೂ.180.38 ಕೋಟಿಗಳನ್ನು ಮತ್ತು ಬೆಂ.ಮ.ಸಾ.ಸಂಸ್ಥೆಗೆ ರೂ.197.24 ಕೋಟಿಗಳನ್ನು ಬಿಡುಗಡೆ ಮಾಡಲಾಗಿರುತ್ತದೆ ಹಾಗೂ ಆಗಸ್ಟ್-2021ರ ಮಾಹೆಯ ಶೇ.50 ರಷ್ಟು ವೇತನವನ್ನು ನಿಗಮದ ಆಂತರಿಕ ಸಂಪನ್ಮೂಲಗಳಿಂದ ಪಾವತಿ ಮಾಡಲಾಗಿದ್ದು, ಉಳಿದ ಮೊತ್ತಕ್ಕೆ ಸರ್ಕಾರದ ಹಂತದಲ್ಲಿ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ. |

| | | |
|---|---|---|
| ಇ. | ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ನೌಕರರಿಗೆ ಕ್ಷುಲ್ಲಕ ಕಾರಣಗಳಿಗಾಗಿ ನೋಟೀಸ್ ಜಾರಿ ಮಾಡುವುದು, ವೇತನ ತಡೆಹಿಡಿಯುವುದು ಮತ್ತು ಇಲಾಖಾ ವಿಚಾರಣೆಗೆ ಒಳಪಡಿಸುವಂತಹ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕ.ರಾ.ರ.ಸಾ.ನಿಗಮ ಮತ್ತು ಬೆಂ.ಮ.ಸಾ.ಸಂಸ್ಥೆಯ ಸಿಬ್ಬಂದಿಗಳು/ ಅಧಿಕಾರಿಗಳು ಯಾವುದೇ ಪ್ರಕರಣದಲ್ಲಿ ಸಿಲುಕಿದಲ್ಲಿ ಅವರುಗಳ ವಿರುದ್ಧ ಪ್ರಕರಣದ ಗಹನತೆಗೆ ಅನುಗುಣವಾಗಿ ಸಂಸ್ಥೆಯ ನೌಕರರ (ನಡತೆ & ಶಿಸ್ತು) ನಿಯಮಾವಳಿಗಳು 1971ರ ಪ್ರಕಾರ ಶಿಸ್ತು ಕ್ರಮ ಕೈಗೊಳ್ಳಲಾಗುತ್ತಿದ್ದು, ವಿನಾಕಾರಣ ಯಾವುದೇ ಶಿಸ್ತುಕ್ರಮ ಕೈಗೊಳ್ಳಲಾಗುತ್ತಿಲ್ಲ. ಆಡಳಿತ ಹಾಗೂ ನೌಕರರುಗಳ ಹಿತದೃಷ್ಟಿಯನ್ನು ಆಧರಿಸಿ, ನಿಗಮದಲ್ಲಿ ಕಾರ್ಯದಕ್ಷತೆ ಹಾಗೂ ಶಿಸ್ತನ್ನು ಕಾಪಾಡುವ ನಿಟ್ಟಿನಲ್ಲಿ ನೌಕರರುಗಳ ದುರ್ನಡತೆ/ ಕರ್ತವ್ಯಲೋಪ ಕುರಿತು ಆರೋಪ ಪಟ್ಟಿ ನೀಡಿ, ಅವಶ್ಯವಿದ್ದಲ್ಲಿ ವಿಚಾರಣೆ ನಡೆಸಿ ಆರೋಪಗಳು ಸಾಬೀತಾದಲ್ಲಿ ದಂಡನೆಗಳನ್ನು ವಿಧಿಸಲು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಶಿಸ್ತು ಮತ್ತು ನಡತೆ ನಿಯಮಾವಳಿ-1971 ಹಾಗೂ ತಿದ್ದುಪಡಿ ಅನುಸೂಚಿಗಳ ಅಧಿನಿಯಮದ ಅಡಿಯಲ್ಲಿ ಅವಕಾಶವಿರುವಂತೆ ಕ್ರಮವಹಿಸಲಾಗುತ್ತಿದೆ. |
| ಈ. | ಹಾಸನ ಜಿಲ್ಲೆಯ ಎಲ್ಲಾ ಗ್ರಾಮಗಳಿಗೂ ಕೆ.ಎಸ್.ಆರ್.ಟಿ.ಸಿ ಬಸ್ ಗಳು ಸಂಚರಿಸುತ್ತಿವೆಯೇ; ಇಲ್ಲದಿದ್ದಲ್ಲಿ, ಎಲ್ಲಾ ಗ್ರಾಮಗಳಿಗೂ ಕೆಎಸ್‌ಆರ್‌ಟಿಸಿ ಬಸ್‌ಗಳು ಸಂಚರಿಸಲು ಸರ್ಕಾರ ಯಾವಾಗ ಕ್ರಮ ವಹಿಸಲಾಗುವುದು? (ಮಾಹಿತಿ ನೀಡುವುದು) | ಹಾಸನ ಜಿಲ್ಲೆಯಲ್ಲಿ ಒಟ್ಟು 2452 ಹಳ್ಳಿಗಳಿದ್ದು, 2451 ಹಳ್ಳಿಗಳಿಗೆ ನಿಗಮದ ವತಿಯಿಂದ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ. ಸಕಲೇಶಪುರ ತಾಲ್ಲೂಕಿನ ಅತ್ತಿಗನಹಳ್ಳಿಯಲ್ಲಿ ವಿರಳ ಜನಸಂದಣಿ ಇರುವುದರಿಂದ ಹಾಗೂ ಸದರಿ ಗ್ರಾಮದ ರಸ್ತೆಯು ಭಾರಿ ವಾಹನಗಳ ಕಾರ್ಯಾಚರಣೆಗೆ ಯೋಗ್ಯವಲ್ಲದೇ ಇರುವುದರಿಂದ ಸದರಿ ಗ್ರಾಮಕ್ಕೆ ಸಾರಿಗೆ ಸೌಲಭ್ಯ ಕಲ್ಪಿಸಿರುವುದಿಲ್ಲ.<br><br>ಮುಂದುವರೆದು, ಕೋವಿಡ್-19ರ ಹಿನ್ನೆಲೆಯಲ್ಲಿ ಲಾಕ್‌ಡೌನ್ ಘೋಷಿಸಿದ್ದರಿಂದ ನಿಗಮದ ವತಿಯಿಂದ ಹಾಸನ ಜಿಲ್ಲೆಯಾದ್ಯಂತ ಕಾರ್ಯಾಚರಣೆಯಲ್ಲಿದ್ದ ಅನುಸೂಚಿಗಳನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿತ್ತು, |

| | | |
|---|---|---|
| | | ಲಾಕ್‌ಡೌನ್ ತೆರವುಗೊಳಿಸಿದ ನಂತರ ಸಾರ್ವಜನಿಕ ಪ್ರಯಾಣಿಕರ ಮತ್ತು ಶಾಲಾ/ ಕಾಲೇಜು ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಪ್ರಯಾಣಿಕರ ದಟ್ಟಣೆ ಮತ್ತು ಅವಶ್ಯಕತೆಗೆ ಅನುಗುಣವಾಗಿ ಸಾರಿಗೆ ಸೌಲಭ್ಯವನ್ನು ಪುನರಾರಂಭಿಸಲಾಗಿದೆ. ಸಾರ್ವಜನಿಕ ಪ್ರಯಾಣಿಕರು ಮತ್ತು ವಿದ್ಯಾರ್ಥಿಗಳ ದಟ್ಟಣೆಗೆ ಅನುಗುಣವಾಗಿ ಹಂತಹಂತವಾಗಿ ಸಾರಿಗೆಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ. |

ಸಂಖ್ಯೆ: ಟಿಡಿ 228 ಟಿಸಿಕ್ಯೂ 2021

(ಬಿ.ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು

**ಸಾರಿಗೆ ಸಂಸ್ಥೆಗಳ ನೌಕರರ ಪ್ರತಿಭಟನೆಗಳ ಹಿನ್ನೆಲೆಯಲ್ಲಿ ಸರ್ಕಾರವು ನೀಡಿದ್ದ ಭರವಸೆಗಳು ಮತ್ತು ಈ ಭರವಸೆಗಳ ಬಗ್ಗೆ ಸರ್ಕಾರವು ತೆಗೆದುಕೊಂಡಿರುವ ಕ್ರಮದ ವಿವರ.**

| ಕ್ರ.ಸಂ | ಭರವಸೆಗಳು | ತೆಗೆದುಕೊಂಡ ಕ್ರಮ |
|---|---|---|
| 1 | ಸಾರಿಗೆ ಸಂಸ್ಥೆಯ ನೌಕರರಿಗೆ ಆರೋಗ್ಯ ಭಾಗ್ಯ/ ಜ್ಯೋತಿಸಂಜೀವಿನಿ ವಿಮಾ ಯೋಜನೆಯನ್ನು ಅಳವಡಿಸುವ ಕುರಿತು. | ಸರ್ಕಾರದ ಮಾದರಿಯಲ್ಲಿ ನಿಗಮದ ನೌಕರರು ಚಿಕಿತ್ಸೆ ಪಡೆದ ಆಸ್ಪತ್ರೆಯ ದರ್ಜೆಗೆ ಅನುಗುಣವಾಗಿ ಅಂದರೆ, ಎನ್.ಎ.ಬಿ.ಹೆಚ್ ದರ್ಜೆಯ ಖಾಸಗಿ ಆಸ್ಪತ್ರೆ ಆಗಿದ್ದಲ್ಲಿ ಸಿ.ಜಿ.ಹೆಚ್.ಎಸ್-2014 ಎನ್.ಎ.ಬಿ.ಹೆಚ್ ದರದಲ್ಲಿ ಮತ್ತು ನಾನ್-ಎನ್.ಎ.ಬಿ.ಹೆಚ್ ದರ್ಜೆಯ ಆಸ್ಪತ್ರೆ ಆಗಿದ್ದಲ್ಲಿ ಸಿ.ಜಿ.ಹೆಚ್.ಎಸ್-2014 ನಾನ್-ಎನ್.ಎ.ಬಿ.ಹೆಚ್ ದರದಲ್ಲಿ ಲೆಕ್ಕ ಪರಿಶೀಲನೆ ಮಾಡಿ ಅರ್ಹ ಮೊತ್ತವನ್ನು ಮರುಪಾವತಿಸಲು ಆದೇಶವನ್ನು ದಿನಾಂಕ.24.02.2021 ರಂದು ಹೊರಡಿಸಲಾಗಿದ್ದು, ಇದನ್ನು ದಿನಾಂಕ.01.04.2021 ರಿಂದ ಅನ್ವಯಿಸುವಂತೆ ಜಾರಿ ಮಾಡಲಾಗಿದೆ.<br>ಸರ್ಕಾರದಲ್ಲಿ ಇರುವ ಜ್ಯೋತಿ ಸಂಜೀವಿನಿ ಯೋಜನೆಯ ಸಾಧಕ ಬಾಧಕಗಳನ್ನು ಪರಿಶೀಲಿಸಲಾಗಿದೆ. ಸರ್ಕಾರವು "ಆರೋಗ್ಯ ಸಿರಿ" ಯೋಜನೆಯನ್ನು ಜಾರಿಗೆ ತಂದ ಪಕ್ಷದಲ್ಲಿ, ಅದರ ಸಾಧಕ ಬಾಧಕಗಳನ್ನು ಗಣನೆಗೆ ತೆಗೆದುಕೊಂಡು ನಿಗಮದಲ್ಲಿ ಅಳವಡಿಸಿಕೊಳ್ಳಲು ಪರಿಶೀಲಿಸಲಾಗುವುದು. |
| 2 | ಕೋವಿಡ್-19 ಸೋಂಕು ತಗುಲಿದ ನಿಗಮದ ನೌಕರರು ಮರಣ ಹೊಂದಿದ ಸಂದರ್ಭದಲ್ಲಿ ಅವರ ಕುಟುಂಬಗಳಿಗೆ ಸರ್ಕಾರಿ ನೌಕರರಿಗೆ ನೀಡಿದಂತೆ ರೂ.30 ಲಕ್ಷ ಪರಿಹಾರ ನೀಡುವ ಕುರಿತು. | ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ತುತ್ತಾಗಿ ಮೃತಪಟ್ಟ ನಿಗಮದ ನೌಕರರ ಪೈಕಿ 07 ನೌಕರರ ಕುಟುಂಬದವರಿಗೆ ದಿನಾಂಕ: 26-02-2021 ರಂದು ಸನ್ಮಾನ್ಯ ಮುಖ್ಯಮಂತ್ರಿ ರವರಿಂದ ತಲಾ ರೂ.30 ಲಕ್ಷಗಳ ಚೆಕ್‌ಗಳನ್ನು ನೀಡಲಾಗಿದೆ.<br>ಅಲ್ಲದೇ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವತಿಯಿಂದ 4 (ನಾಲ್ಕು) ನೌಕರರ ಕುಟುಂಬದವರಿಗೆ ತಲಾ ರೂ.30 ಲಕ್ಷಗಳ ಚೆಕ್‌ಗಳನ್ನು ನೀಡಲಾಗಿದೆ.<br>ಉಳಿದ ಪ್ರಕರಣಗಳನ್ನು ನಿಯಮಾನುಸಾರ ಪರಿಶೀಲಿಸಿ, ಅರ್ಹ ಪ್ರಕರಣಗಳಲ್ಲಿ ಸೂಕ್ತ ಪರಿಹಾರವನ್ನು ಮಂಜೂರು ಮಾಡಲು ಕ್ರಮ ವಹಿಸಲಾಗುವುದು. |
| 3 | ನಿಗಮದಲ್ಲಿ ಹೆಚ್.ಆರ್.ಎಂ.ಎಸ್ (ಮಾನವ ಸಂಪನ್ಮೂಲ) ವ್ಯವಸ್ಥೆಯನ್ನು ಜಾರಿಗೊಳಿಸುವ ಕುರಿತು. | ಸಾರಿಗೆ ಸಂಸ್ಥೆಗಳಲ್ಲಿ ಮಾನವ ಸಂಪನ್ಮೂಲ ವ್ಯವಸ್ಥೆಯನ್ನು (ಹೆಚ್.ಆರ್.ಎಂ.ಎಸ್) ವ್ಯವಸ್ಥೆಯನ್ನು ಜಾರಿಗೊಳಿಸಿದ್ದು, ಕೆಳಕಂಡ ಪ್ರಮುಖ ಅಂಶಗಳನ್ನು ಒಳಗೊಂಡಿರುತ್ತದೆ :<br>1. ರಜೆ ನಿರ್ವಹಣೆ ಮತ್ತು ಡ್ಯೂಟಿ ರೋಟಾ ಪದ್ಧತಿ.<br>2. ಭವಿಷ್ಯನಿಧಿ / ಐಚ್ಛಿಕ ಭವಿಷ್ಯ ನಿಧಿ ಮಾಹಿತಿ.<br>3. ನೌಕರರ ಕುಂದು ಕೊರತೆ ನಿವಾರಣೆ.<br>4. ವರ್ಗಾವಣೆ ತಂತ್ರಾಂಶ ಮತ್ತು ಪೇ ರೋಲ್ ವ್ಯವಸ್ಥೆ.<br>5. ಐಟಿಎಸ್ ವ್ಯವಸ್ಥೆಯಡಿ ನೌಕರರ ಮೇಲೆ ದಾಖಲಿಸಬಹುದಾದ ನಕಲಿ ಅಪಘಾತ ಪ್ರಕರಣಗಳನ್ನು ತಪ್ಪಿಸಬಹುದು. |

| | | |
|---|---|---|
| 4 | ಸಿಬ್ಬಂದಿಯು ಕರ್ತವ್ಯ ನಿರ್ವಹಿಸಿದ ಸಂದರ್ಭದಲ್ಲಿ ಭತ್ಯೆಯನ್ನು (ಬಾಟಾ) ನೀಡುವ ಕುರಿತು. | ನಿಗಮದ ಸಿಬ್ಬಂದಿಗಳು ದಿನದ ಕರ್ತವ್ಯದ ಸಲುವಾ ಅರ್ಹ ವಿವಿಧ ಭತ್ಯೆಗಳು ಮತ್ತು ಬಾಟಾಗಳು ಹಾಗೂ ಮಾಸಿಕ ಭತ್ಯೆಗಳನ್ನು ದಿನಾಂಕ.01.03.2021 ರಿಂದ ಜಾರಿಗೆ ಬರುವಂತೆ ನೀಡಲು ಸೂಚಿಸಿ ಆದೇಶವನ್ನು ಈಗಾಗಲೇ ಹೊರಡಿಸಲಾಗಿದೆ ಮತ್ತು ಕ್ರಮ ಜಾರಿಯಲ್ಲಿದೆ. |
| 5 | ಘಟಕದ ವ್ಯಾಪ್ತಿಯಲ್ಲಿ ನೌಕರರಿಗೆ ಕಿರುಕುಳ ತಪ್ಪಿಸಲು ಸೂಕ್ತ ಆಡಳಿತ ವ್ಯವಸ್ಥೆ ಜಾರಿಗೆ ತರುವ ಕುರಿತು. | 1. ಚಾಲಕ ನಿರ್ವಾಹಕರಿಗೆ ಅನುಸೂಚಿಗಳ ನಿಗಧಿ ವಿಚಾರದಲ್ಲಿ ಏಕರೀತಿಯ ಅಂಶಗಳನ್ನು ಅನುಸರಿಸಲು ಸಿಇಟಿ ಮಾದರಿಯಲ್ಲಿ ಕರ್ತವ್ಯ ನಿಯೋಜನೆಯ ಡ್ಯೂಟಿ ರೋಟಾ ಪದ್ಧತಿಯನ್ನು ಜಾರಿಗೆ ತರಲಾಗಿದೆ.<br><br>2. ನೌಕರರಿಗೆ ರಜಾ ಮಂಜೂರಾತಿ ಕುರಿತಂತೆ ಪಾರದರ್ಶಕ ಮತ್ತು ತಂತ್ರಾಂಶ ಆಧಾರಿತ ರಜಾ ನಿರ್ವಹಣಾ ವ್ಯವಸ್ಥೆ ಜಾರಿಗೆ ತರಲಾಗಿದೆ. ಈ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸಲು ನಿರ್ದೇಶನಗಳನ್ನು ನೀಡಿದ್ದು, ಅದರಂತೆ ಕ್ರಮ ಜಾರಿಯಲ್ಲಿದೆ.<br><br>3. ನೌಕರರ ಸೇವಾ ಸಂಬಂಧಿತ ಕುಂದುಕೊರತೆ/ ಸಮಸ್ಯೆಗಳನ್ನು ಪರಿಶೀಲಿಸಿ, ಬಗೆಹರಿಸುವ ಪದ್ಧತಿ ಜಾರಿಯಲ್ಲಿದ್ದು, ಅದನ್ನು ಕಟ್ಟುನಿಟ್ಟಾಗಿ/ ಪರಿಣಾಮಕಾರಿಯಾಗಿ ನಿರ್ವಹಿಸಲಾಗುತ್ತಿದೆ.<br><br>ಅದರಂತೆ, ವಿಭಾಗಗಳ ಅಧಿಕಾರಿಗಳ ತಂಡವು ಘಟಕಗಳಿಗೆ ಭೇಟಿ ನೀಡಿ ನೌಕರರ ಕುಂದುಕೊರತೆಗಳನ್ನು ಪಡೆದು, ಪರಿಶೀಲಿಸಿ ಬಗೆಹರಿಸುವ ಪದ್ಧತಿ ನಿರಂತರವಾಗಿ ನಡೆಯುತ್ತಿದೆ.<br><br>4. ತನಿಖಾ ಕಾರ್ಯದಲ್ಲಿ ಪಾರದರ್ಶಕತೆಯನ್ನು ತರುವ ಸಲುವಾಗಿ ತನಿಖಾ ಸಿಬ್ಬಂದಿಗಳಿಗೆ ಕಡ್ಡಾಯವಾಗಿ Body Camera ವನ್ನು ಬಳಸುವಂತೆ ನಿರ್ದೇಶನಗಳನ್ನು ದಿನಾಂಕ.03.02.2021 ರಂತೆ ನೀಡಲಾಗಿದೆ ಮತ್ತು ಅದರಂತೆ ಕ್ರಮ ಜಾರಿಯಲ್ಲಿದೆ.<br><br>5. ತಂತ್ರಾಂಶ ಆಧಾರಿತ ನೌಕರರ ಕುಂದುಕೊರತೆ ನಿವಾರಣಾ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. |
| 6 | ಎನ್.ಐ.ಎನ್.ಸಿ (ನಾಟ್ ಇಶ್ಯೂಡ್ - ನಾಟ್ ಕಲೆಕ್ಟೆಡ್) ಪದ್ಧತಿಯನ್ನು ಪುನರ್ ಪರಿಶೀಲಿಸಿ ಸೂಕ್ತ ವ್ಯವಸ್ಥೆ ಅಳವಡಿಸಿಕೊಳ್ಳುವ ಕುರಿತು. | ಎನ್.ಐ.ಎನ್.ಸಿ (ನಾಟ್ ಇಶ್ಯೂಡ್ - ನಾಟ್ ಕಲೆಕ್ಟೆಡ್) ಪ್ರಕರಣಗಳಲ್ಲಿ ತೆಗೆದುಕೊಳ್ಳಬೇಕಾದ ಕ್ರಮದ ಕುರಿತು ಪರಿಷ್ಕೃತ ನಿರ್ದೇಶನಗಳ ಆದೇಶವನ್ನು ದಿನಾಂಕ:-02.03.2021 ರಂದು ಹೊರಡಿಸಲಾಗಿದೆ ಮತ್ತು ಅದರಂತೆ ಕ್ರಮ ಜಾರಿಯಲ್ಲಿದೆ.<br><br>ಅಲ್ಲದೇ, ತನಿಖಾ ಕಾರ್ಯದಲ್ಲಿ ಪಾರದರ್ಶಕತೆಯನ್ನು ತರುವ ಸಲುವಾಗಿ ತನಿಖಾ ಸಿಬ್ಬಂದಿಗಳಿಗೆ ಕಡ್ಡಾಯವಾಗಿ Body Camera ವನ್ನು ಬಳಸುವಂತೆ ನಿರ್ದೇಶನಗಳನ್ನು ದಿನಾಂಕ.03.02.2021 ರಂತೆ ನೀಡಲಾಗಿದೆ ಮತ್ತು ಕ್ರಮ ಜಾರಿಯಲ್ಲಿದೆ. |

| | | |
|---|---|---|
| 7. | ಅಂತರ ನಿಗಮ ವರ್ಗಾವಣೆ ಕುರಿತು. | ಸರ್ಕಾರದ ಆದೇಶ ಸಂಖ್ಯೆ: ಟಿಡಿ 45 ಟಿಸಿಎಸ್ 2020 ದಿನಾಂಕ:09.03.2021 ಹಾಗೂ ಟಿಡಿ 45 ಟಿಸಿಎಸ್ 2020 ದಿನಾಂಕ:23.03.2021 ರನ್ವಯ ದರ್ಜೆ-3 ಮೇಲ್ವಿಚಾರಕೇತರ ಮತ್ತು ದರ್ಜೆ-4 ರ ನೌಕರರಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂ.ಮ.ಸಾ.ಸಂಸ್ಥೆ, ಕ.ಕ.ರ.ಸಾ.ಸಂಸ್ಥೆ ಮತ್ತು ವಾ.ಕ.ರ.ಸಾ.ಸಂಸ್ಥೆಗಳಿಗೆ ಪ್ರತಿ ವರ್ಷ, ವರ್ಷಕ್ಕೆ ಒಂದು ಬಾರಿ ಅಂತರ ನಿಗಮ ವರ್ಗಾವಣೆÀಗೆ ಅವಕಾಶ ಕಲ್ಪಿಸಲಾಗಿದೆ. ಅದರಂತೆ, ನಿಗಮದಲ್ಲಿ 2021-22ನೇ ಸಾಲಿನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸ್ವೀಕರಿಸಿ, ನೌಕರರ ಹುದ್ದೆಯ ಸೇವಾ ಜ್ಯೇಷ್ಠಯಾಧಾರದ ಮೇಲೆ ಒಟ್ಟು ಸಾಮಾನ್ಯ ವರ್ಗಾವಣೆಯಡಿ 1,975 ಹಾಗೂ ಪರಸ್ಪರ ವರ್ಗಾವಣೆಯಡಿ 388 ನೌಕರರನ್ನು ವರ್ಗಾವಣೆ ಮಾಡಲಾಗಿದೆ.<br><br>ಸಾಮಾನ್ಯ ವರ್ಗಾವಣೆಯಡಿ ವರ್ಗಾವಣೆಯಾದ 1,975 ನೌಕರರ ಪೈಕಿ, ಆನ್‌ಲೈನ್ ಕೌನ್ಸಲಿಂಗ್‌ನಲ್ಲಿ ಅರ್ಜಿ ಸಲ್ಲಿಸಿದ ನೌಕರರ ಇಚ್ಛೆಯ ಮೇರೆಗೆ ವಿಭಾಗ ಹಂಚಿಕೆ ಆದೇಶ ಹೊರಡಿಸಲು ಕ್ರಮ ವಹಿಸಲಾಗಿದೆ. |
| 8. | ತರಬೇತಿಯಲ್ಲಿರುವ ನೌಕರರನ್ನು ತರಬೇತಿ ಅವಧಿಯನ್ನು 02 ವರ್ಷದಿಂದ 01 ವರ್ಷಕ್ಕೆ ಇಳಿಸುವ ಕುರಿತು. | ದಿನಾಂಕ:-01.07.2021 ರಿಂದ ಜಾರಿಗೆ ಬರುವಂತೆ ತರಬೇತಿ ಅವಧಿಯನ್ನು 01 ವರ್ಷಕ್ಕೆ ಇಳಿಸಲಾಗಿದೆ. |
| 9. | ರಾಜ್ಯ ಸರ್ಕಾರದ ಆರನೇ ವೇತನ ಆಯೋಗದ ಶಿಫಾರಸ್ಸುಗಳನ್ನು ರಸ್ತೆ ಸಾರಿಗೆ ನಿಗಮಗಳಲ್ಲಿ ಅಳವಡಿಸಿಕೊಳ್ಳುವ ಸಂಬಂಧ ಸರ್ಕಾರವು ಆರ್ಥಿಕ ಅಂಶಗಳನ್ನು ಪರಿಗಣಿಸಿ ತೀರ್ಮಾನಿಸುವ ಕುರಿತು" | "ರಾಜ್ಯ ಸರ್ಕಾರದ ಆರನೇ ವೇತನ ಆಯೋಗದ ಶಿಫಾರಸ್ಸುಗಳನ್ನು ರಸ್ತೆ ಸಾರಿಗೆ ನಿಗಮಗಳಲ್ಲಿ ಅಳವಡಿಸಿಕೊಳ್ಳುವ ಸಂಬಂಧ ಸರ್ಕಾರವು ಆರ್ಥಿಕ ಅಂಶಗಳನ್ನು ಪರಿಗಣಿಸಿ ತೀರ್ಮಾನಿಸುವ ಕುರಿತು" ಸರ್ಕಾರವು ಕರಾರಸಾನಿಗಮದ ವ್ಯವಸ್ಥಾಪಕ ನಿರ್ದೇಶಕರ ಅಧ್ಯಕ್ಷತೆ ಮತ್ತು ಉಳಿದ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕರನ್ನು ಸಮಿತಿಯ ಸದಸ್ಯರನ್ನಾಗಿ ನೇಮಿಸಿ, ಸಮಿತಿಯನ್ನು ರಚಿಸಿರುತ್ತದೆ. ಸಮಿತಿಯು ಈ ಕುರಿತು ಕೂಲಂಕುಷವಾಗಿ ಪರಿಶೀಲಿಸುವ ಸಲುವಾಗಿ 11 ಬಾರಿ ಸಭೆ ನಡೆಸಿ, ಚರ್ಚಿಸಿರುತ್ತದೆ.<br><br>ಸಮಿತಿಯು ಸಿಬ್ಬಂದಿಯ ವೇತನ ಪರಿಷ್ಕರಣೆ ಸಂಬಂಧ ರಾಜ್ಯ ರಸ್ತೆ ಸಾರಿಗೆ ನಿಗಮಗಳಲ್ಲಿ ಪ್ರಸ್ತುತ ಜಾರಿಯಲ್ಲಿ ಇರುವ ಪದ್ಧತಿ, ರಸ್ತೆ ಸಾರಿಗೆ ನಿಗಮಗಳ ನೌಕರರ ವಿವಿಧ ಹುದ್ದೆಗಳು, ವರ್ಗಗಳು, ವಿವಿಧ ವೇತನ ಶ್ರೇಣಿಗಳು, ಮುಂಬಡ್ತಿ ವೇತನ ಶ್ರೇಣಿಗಳು, ದೀರ್ಘಾವಧಿಗೆ ಮುಂಬಡ್ತಿ ಸಿಗದೇ ಇರುವ ಹುದ್ದೆಗಳ ಉನ್ನತ / ಮಧ್ಯವರ್ತಿ ವೇತನ ಶ್ರೇಣಿಗಳು ಇತ್ಯಾದಿಗಳನ್ನು ಪರಿಶೀಲಿಸಿದೆ.<br><br>ಅಲ್ಲದೇ, ರಾಜ್ಯ ಸರ್ಕಾರದ ಆರನೇ ವೇತನ ಆಯೋಗದ ಶಿಫಾರಸ್ಸುಗಳು ಹಾಗೂ ಮುಖ್ಯ ವೇತನ ಶ್ರೇಣಿ ಮತ್ತು ಸ್ಥಾಯಿ ವೇತನ ಶ್ರೇಣಿಗಳು ಮತ್ತು ರಾಜ್ಯ ಸರ್ಕಾರದಲ್ಲಿ ಇರುವ ವಿವಿಧ ಹುದ್ದೆಗಳು, ವರ್ಗಗಳು, ಮುಂಬಡ್ತಿ ವೇತನ |

| | | |
|---|---|---|
| | | ಹುದ್ದೆಗಳ ವೇತನ ಶ್ರೇಣಿಗಳು ಇತ್ಯಾದಿಗಳನ್ನು ಸಹ ಪರಿಶೀಲಿಸಿದೆ.<br><br>ಈ ಕುರಿತು ನಿಗಮದ ಎಲ್ಲಾ ನೋಂದಾಯಿತ ಕಾರ್ಮಿಕ ಸಂಘಗಳ ಅಭಿಪ್ರಾಯವನ್ನು ಪಡೆಯಲಾಗಿದೆ ಮತ್ತು "ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ನೌಕರರ ಕೂಟ"ದ ಪದಾಧಿಕಾರಿಗಳೊಂದಿಗೆ ಐದು ಬಾರಿ ಸಭೆ ನಡೆಸಿ ಚರ್ಚಿಸಲಾಗಿದೆ.<br><br>ಅದೇ ರೀತಿ, ರಸ್ತೆ ಸಾರಿಗೆ ನಿಗಮಗಳಲ್ಲಿ ಇರುವ ಬಹಳಷ್ಟು ಹುದ್ದೆಗಳು ರಾಜ್ಯ ಸರ್ಕಾರದಲ್ಲಿ ಇಲ್ಲದೇ ಇರುವುದು ಮತ್ತು ರಾಜ್ಯ ಸರ್ಕಾರದ ಆರನೇ ವೇತನ ಆಯೋಗದ ರಚನೆ ಮತ್ತು ವೇತನ ನಿಗಧಿ ಪದ್ಧತಿ ಸಹ ಬೇರೆಯದೇ ಆಗಿರುವುದು, ಇದರಿಂದಾಗಿ, ರಸ್ತೆ ಸಾರಿಗೆ ನಿಗಮಗಳ ವೇತನ ಶ್ರೇಣಿಗಳು ಮತ್ತು ವೇತನ ನಿಗಧಿ ಹೊಂದಾಣಿಕೆ ಆಗದೇ ಇರುವುದು ಇತ್ಯಾದಿ ಎಲ್ಲಾ ಅಂಶಗಳನ್ನು ಕೂಲಂಕುಷವಾಗಿ ಪರಿಶೀಲಿಸಿ, ಸಮಗ್ರ ವರದಿಯನ್ನು ದಿನಾಂಕ:03.04.2021 ರಂದು ಸರ್ಕಾರಕ್ಕೆ ಸಲ್ಲಿಸಿದ್ದು, ಪರಿಶೀಲನೆಯಲ್ಲಿದೆ. |